ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 13-03-2017

# ಪತ್ರಿಕಾ ಆಮಂತ್ರಣ

1. "ಪ್ಲಾಸ್ಟಿಕ್ ನಿಷೇಧ" ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ.

   ಪುಟ್ಟೇನಹಳ್ಳಿ ಕೆರೆಯಲ್ಲಿ ಸಂಗ್ರಹಗೊಂಡಿರುವ ಪ್ಲಾಸ್ಟಿಕ್ ತ್ಯಾಜ್ಯವನ್ನು ಸ್ವಚ್ಛಗೊಳಿಸುವುದರ ಜೊತೆಗೆ ಪ್ಲಾಸ್ಟಿಕ್ ನಿಷೇಧದ ಬಗ್ಗೆ ಸಂದೇಶ ಸಾರ್ವಜನಿಕರಿಗೆ ನೀಡುವ ಸಲುವಾಗಿ ಜಾಥಾ.

   ದಿನಾಂಕ: **14-03-2017** ಮಂಗಳವಾರ, ಸಮಯ: ಬೆಳಿಗ್ಗೆ **8.00** ಗಂಟೆಗೆ

   ಸ್ಥಳ: ಪುಟ್ಟೇನಹಳ್ಳಿ ಕೆರೆ, ಜೆ.ಪಿ. ನಗರ, ಬೆಂಗಳೂರು.

   ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ **7.00** ಗಂಟೆಗೆ ನಗರದ ಇನ್‌ಫೆಂಟ್ರಿ ರಸ್ತೆಯಲ್ಲಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

   ಸಂಪರ್ಕ: ಬಿ. ಬಸವರಾಜು,
   ಮೊ. ಸಂಖ್ಯೆ : **9449987547**

2. ಪತ್ರಿಕಾಗೋಷ್ಠಿ:

   **14**ನೇ ವಿಧಾನಸಭೆಯ **13**ನೇ ಅಧಿವೇಶನದ ಮುಂದುವರೆದ ಉಪವೇಶನ ಕುರಿತಂತೆ

   ಕೆ.ಬಿ. ಕೋಳಿವಾಡ,
   ವಿಧಾನಸಭೆಯ ಸಭಾಧ್ಯಕ್ಷರು,

   ದಿನಾಂಕ: **14-03-2017** ಮಂಗಳವಾರ, ಸಮಯ: ಬೆಳಿಗ್ಗೆ **11.30** ಗಂಟೆಗೆ

   ಸ್ಥಳ: ಕೊಠಡಿ ಸಂಖ್ಯೆ **106**, ವಿಧಾನಸೌಧ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

## ಕಲಾ ಭೋದಕರಿಂದ ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

ಬಾಲ ಭವನ, ಕಬ್ಬನ್‌ಪಾರ್ಕ್ ಬೆಂಗಳೂರು ವತಿಯಿಂದ ಏಪ್ರಿಲ್ 14 ರಿಂದ ಮೇ 15 ರವರೆಗೆ ಬೇಸಿಗೆ ರಜೆ ಅಂಗವಾಗಿ 5 – 16 ವರ್ಷದ ಮಕ್ಕಳಿಗೆ ವಿವಿಧ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಬೇಸಿಗೆ ಶಿಬಿರವನ್ನು ಏರ್ಪಡಿಸಿದೆ. ಶಿಬಿರದ ಮಕ್ಕಳಿಗೆ ತರಬೇತಿ ನೀಡಲು ಅನುಭವಿ ನುರಿತ ಕಲಾ ಭೋದಕರಿಂದ ಅರ್ಜಿ ಆಹ್ವಾನಿಸಿದೆ.

ಚಿತ್ರಕಲೆ, ಕರಕುಶಲೆ, ಸಂಗೀತ, ನೃತ್ಯ, ಜೇಡಿಮಣ್ಣಿನ ಕಲೆ, ಕರಾಟೆ, ಯೋಗ, ಕೀಬೋರ್ಡ್, ತಬಲ, ಯೋಗ, ಕಸದಿಂದ ರಸ, ಮೆಹಂದಿ, ಕ್ಯಾಲಿಗ್ರಾಫಿ, ಏರೋಬಿಕ್ಸ್, ಟ್ರೆಡಿಷನಲ್ ಆರ್ಟ್, ಅಲ್ಯೂಮಿನಿಯಂ ಫಾಯಿಲ್ ವರ್ಕ್ಸ್, ಸೋಲಾವುಡ್ ವರ್ಕ್, ಏರೋ ಮಾಡಲಿಂಗ್, ಶಿಪ್ ಮಾಡಲಿಂಗ್, ರಂಗ ತರಬೇತಿ, ಫೋಟೋಗ್ರಾಫಿ ಇತ್ಯಾದಿ ಕಲಾಕ್ಷೇತ್ರಗಳಲ್ಲಿ ಅನುಭವ ಹೊಂದಿರುವ ಅರ್ಹ ಕಲಾ ಭೋದಕರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆಸಕ್ತರು, ತಮ್ಮ ಸ್ವವಿವರಗಳೊಂದಿಗೆ ಹಾಗೂ ಸದರಿ ಕ್ಷೇತ್ರದಲ್ಲಿ ಹೊಂದಿರುವ ವಿದ್ಯಾರ್ಹತೆ ಮತ್ತು ಅನುಭವದ ಬಗ್ಗೆ ಪ್ರಮಾಣ ಪತ್ರಗಳೊಂದಿಗೆ ಕೋರಿಕೆ ಅರ್ಜಿಯನ್ನು ಇತ್ತೀಚಿನ ಒಂದು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಲಗತ್ತಿಸಿ ಕಾರ್ಯದರ್ಶಿಗಳು, ಬಾಲ ಭವನ ಸೊಸೈಟಿ, ಕಬ್ಬನ್ ಉದ್ಯಾನವನ, ಬೆಂಗಳೂರು – 560 001 ಇಲ್ಲಿಗೆ ಮಾರ್ಚ್ 25 ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಾರ್ಯದರ್ಶಿಗಳು, ಬಾಲ ಭವನ ಸೊಸೈಟಿ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ : 080 – 22864189/22861423 ರ ಮೂಲಕ ಸಂಪರ್ಕಿಸಬಹುದಾಗಿದೆ.

ಎಂಆರ್‌ಎಂ: ಜಿಪಿಆರ್

# ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ –2017

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ ವತಿಯಿಂದ ಮಾರ್ಚ್ 15 ರಂದು ಬೆಳಿಗ್ಗೆ 10.00 ಗಂಟೆಗೆ ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ – 2017 ಅಂಗವಾಗಿ " ಡಿಜಿಟಲ್ ಯುಗದಲ್ಲಿ ಗ್ರಾಹಕರ ಹಕ್ಕುಗಳು " ಎಂಬ ಘೋಷಾ ವಾಕ್ಯದೊಂದಿಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಆಹಾರ ಮತ್ತು, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಯು.ಟಿ. ಖಾದರ್ ಅವರು ಅಂದು ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನಾ ಮತ್ತು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಕೆ.ಜೆ. ಜಾರ್ಜ್, ಕೃಷಿ ಸಚಿವ ಕೃಷ್ಣ ಬೈರೇಗೌಡ ಹಾಗೂ ವಸತಿ ಸಚಿವ ಎಂ. ಕೃಷ್ಣಪ್ಪ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಲಿದ್ದಾರೆ.

ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷ ಹಾಜಿ ಶಫೀ ಉಲ್ಲಾ, ಬೆಂಗಳೂರು ಕೇಂದ್ರ ಲೋಕಸಭಾ ಸದಸ್ಯ ಪಿ.ಸಿ. ಮೋಹನ್ ಹಾಗೂ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಉಪಾಧ್ಯಕ್ಷ ಶ್ರೀನಿವಾಸ್ ಎನ್. ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಬೆಂಗಳೂರಿನ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿಯ ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಅನಿತಾ ಎ. ಪಾಟೀಲ್ ಅವರು ವಿಶೇಷ ಉಪನ್ಯಾಸ ಮಾಡಲಿದ್ದಾರೆ.

ಎಂಆರ್ಎಂಆರ್:ಜಿಪಿಆರ್

# ನಗರದಲ್ಲಿ ಹಿರಿಯ ನಾಗರೀಕರಿಗಾಗಿ
# ಉದ್ಯೋಗ ಮೇಳ ಮತ್ತು ಕೌಶಲ್ಯ ತರಬೇತಿ

**ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)**

**ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ನೈಟಿಂಗೇಲ್ಸ್ ಮೆಡಿಕಲ್ ಟ್ರಸ್ಟ್ ಹಾಗೂ ಸೇಂಟ್ ಜೋಸೆಫ್ಸ್ ಕಾಲೇಜು, ಬೆಂಗಳೂರು ಇವರುಗಳ ಸಹಯೋಗದೊಂದಿಗೆ ಮಾರ್ಚ್ 25 ಮತ್ತು 26 ರಂದು ಎರಡು ದಿನಗಳ ಕಾಲ ನಗರದ ಸೇಂಟ್ ಜೋಸೆಫ್ ಕಾಲೇಜು ಆವರಣ, ರಿಚ್‌ಮಂಡ್ ಸರ್ಕಲ್, ಬೆಂಗಳೂರು ಇಲ್ಲಿ ಹಿರಿಯ ನಾಗರೀಕರ ಉದ್ಯೋಗ ಮೇಳ ಮತ್ತು ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.**

**ಅನೇಕ ಹಿರಿಯ ನಾಗರೀಕರು ವಿದ್ಯಾವಂತರು ಹಾಗೂ ವಿವಿಧ ಕ್ಷೇತ್ರಗಳಲ್ಲಿ 30 ಕ್ಕೂ ಹೆಚ್ಚು ವರ್ಷಗಳ ಕಾಲ ಕೆಲಸ ನಿರ್ವಹಿಸಿದ ಅನುಭವ ಉಳ್ಳವರು ಹಾಗೂ ಸದೃಡರೂ ಆಗಿರುತ್ತಾರೆ. ಇವರು ಗಳಿಸಿರುವ ಜ್ಞಾನ ಮತ್ತು ವಿದ್ವತ್ತು ಇಂದು ಉಪಯೋಗಕ್ಕೆ ಬಾರದೇ ವ್ಯರ್ಥವಾಗುತ್ತಿರುವ ಹಿನ್ನಲೆಯಲ್ಲಿ ಇಂತಹ ಹಿರಿಯ ನಾಗರೀಕರಿಗಾಗಿ ಸಮಾಜದಲ್ಲಿ ಸ್ವಾಭಿಮಾನದಿಂದ ಬದುಕಲು ಅನುವು ಮಾಡುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿರುತ್ತದೆ.**

**ಈ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ನಾಗರಿಕರು ಈ ತರಬೇತಿಯ ಪ್ರಯೋಜನವನ್ನು ಪಡೆದುಕೊಳ್ಳುವಂತೆ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ಮನವಿ ಮಾಡಿದೆ.**

ಎಂಆರ್‌ಎಂ:ಜಿಪಿಆರ್.